Akashvani : Bangalore
Regional Bulletin In Kannada
10.11.2026 / 14.30 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<><*<><><*><>

ಮುಖ್ಯಾಂಶಗಳು

<><*<><><*><>

- ಮುಂದಿನ ಸಂಪುಟ ಸಭೆಯಲ್ಲಿ ಸಮಗ್ರ ವಿಮಾನಯಾನ ನೀತಿ ಮಂಡನೆ: ಸಚಿವ ಎಂ ಬಿ ಪಾಟೀಲ್ ಸ್ಪಷ್ಟನೆ
- ಪೆಟ್ರೋಲ್ ಗೆ ಎಥೆನಾಲ್ ಮಿಶ್ರಣ ವಿಚಾರದಲ್ಲಿ ಕಾಂಗ್ರೆಸ್ ನಿಂದ ಸುಳ್ಳು ಪ್ರಚಾರ - ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ಆರೋಪ
- ಕಲಬುರ್ಗಿಯಲ್ಲಿ ಆಧುನಿಕ ವಚನ ಮಂಟಪ ನಿರ್ಮಾಣಕ್ಕೆ ಸಿದ್ಧತೆ - ಬೆಂಗಳೂರಿನಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಪರಿಶೀಲನಾ ಸಭೆ
- ರಾಜ್ಯದಲ್ಲಿ ಪಡಿತರ ಚೀಟಿದಾರರಿಗೆ ಇ - ಕೆವೈಸಿ ಮಾಡಿಸಲು ಇಂದು ಕೊನೆಯ ದಿನ
- ಪಟಾಕಿ ದುರಂತ; ಬೆಂಗಳೂರಿನ ನಾರಾಯಣ ನೇತ್ರಾಲಯದಲ್ಲಿ ೪೧ ಮಂದಿಗೆ ಚಿಕಿತ್ಸೆ

<><*<><><*><>

ನಾಗರಿಕ ವಿಮಾನಯಾನದ ಬೆಳವಣಿಗೆಯನ್ನು ಗುರಿಯಾಗಿ ಇಟ್ಟುಕೊಂಡು ರಾಜ್ಯ ಸರ್ಕಾರವು ಸಮಗ್ರ ನೀತಿ ರೂಪಿಸಿದೆ. ಇದನ್ನು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗುವುದು ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರಕಾರವೇ ನಿರ್ವಹಿಸಲಿರುವ ವಿಮಾನ ನಿಲ್ದಾಣಗಳಿಗೆ ಸಂಬಂಧಿಸಿದ ಅನುದಾನ, ವಿಜಿಎಫ್, ಸಮರ್ಥ ಕಾರ್ಯಾಚರಣೆ ಸೇರಿದಂತೆ ಹಲವು ಅಂಶಗಳನ್ನು ಈ ನೀತಿಯಲ್ಲಿ ಪರಿಗಣಿಸಲಾಗಿದೆ. ಇದು ಇಡೀ ದೇಶಕ್ಕೆ ಮಾದರಿಯಾಗಲಿದೆ ಎಂದು ಹೇಳಿದ್ದಾರೆ. ಶಿವಮೊಗ್ಗ ವಿಮಾನ ನಿಲ್ದಾಣದಿಂದ ವಿಮಾನಸೇವೆ ಸ್ಥಗಿತವಾಗಿರುವುದಕ್ಕೆ ಕೇಂದ್ರ ಸರಕಾರದ ಉಡಾನ್-೨ ನೀತಿಯ ದೋಷಗಳೇ ಕಾರಣ ಎಂದು ಆರೋಪಿಸಿದ್ದಾರೆ. ಉಡಾನ್ ಯೋಜನೆಯನ್ನು ಮೂರು ವರ್ಷಗಳಿಂದ ಐದು ವರ್ಷಗಳಿಗೆ ವಿಸ್ತರಿಸಬೇಕು ಎಂದು ಒತ್ತಾಯಿಸಿದ್ದಾರೆ. ಕೇಂದ್ರ ಸರ್ಕಾರದ ನಿರ್ಧಾರದಿಂದಾಗಿ ದೇಶದಲ್ಲಿ ಇಂದು ೧೭ ವಿಮಾನ ನಿಲ್ದಾಣಗಳು ಸ್ಥಗಿತಗೊಂಡಿವೆ ಎಂದು ದೂರಿದ್ದಾರೆ. ವಿಮಾನ ನಿಲ್ದಾಣಗಳಿಗೆ ರಾಜ್ಯ ಸರ್ಕಾರ ಸಾವಿರಾರು ಕೋಟಿ ರೂಪಾಯಿ ವೆಚ್ಚಮಾಡಿ, ಅವುಗಳನ್ನು ನಿರ್ವಹಿಸಲು ಕೇಂದ್ರ ಸರ್ಕಾರಕ್ಕೆ ನೀಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಂಸದ ಬಿ.ವೈ.ರಾಘವೇಂದ್ರ ಕೇಂದ್ರ

ಸರ್ಕಾರದ ಮನವೊಲಿಸಿ ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಹಣ ತರಲಿ ಎಂದು ಸವಾಲು ಹಾಕಿದ್ದಾರೆ.

<><*<><><*><>

ರಾಜ್ಯದಲ್ಲಿ ಮಾರಾಟವಾಗುವ ಪೆಟ್ರೋಲ್‌ನಲ್ಲಿ ಶೇಕಡಾ ೨೬ ರಿಂದ ೩೯ ರಷ್ಟು ಎಥೆನಾಲ್ ಇದೆ ಎಂಬ ಆರೋಪಗಳಿಗೆ ಸಂಬಂಧಿಸಿದಂತೆ, ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಅವರು, ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಷ್ಟೊಂದು ಪ್ರಮಾಣದ ಎಥೆನಾಲ್ ಭಾರತದಲ್ಲಿ ಉತ್ಪಾದನೆಯೇ ಆಗುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಎಥೆನಾಲ್ ಮಿಶ್ರಣದ ವಿಷಯದಲ್ಲಿ ಕಾಂಗ್ರೆಸ್ ಸುಳ್ಳು ಪ್ರಚಾರ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ. ಕೇಂದ್ರ ಸರ್ಕಾರದ ಆತ್ಮನಿರ್ಭರ ಭಾರತ ಉಪಕ್ರಮವನ್ನು ಮತ್ತು ರೈತರ ಹಿತಾಸಕ್ತಿಗಾಗಿ ಎಥೆನಾಲ್ ಉತ್ಪಾದನೆಯನ್ನು ಉತ್ತೇಜಿಸುವ ಪ್ರಯತ್ನಗಳನ್ನು ದುರ್ಬಲಗೊಳಿಸಲು ಕಾಂಗ್ರೆಸ್ ಯತ್ನಿಸುತ್ತಿದೆ ಎಂದು ದೂರಿದ್ದಾರೆ. ಪೆಟ್ರೋಲ್‌ಗಿಂತ ಎಥೆನಾಲ್ ದುಬಾರಿಯಾಗಿರುವುದರಿಂದ ಅದನ್ನು ಅತಿಯಾದ ಪ್ರಮಾಣದಲ್ಲಿ ಬಳಿಸಿದರೆ, ತೈಲ ಮಾರುಕಟ್ಟೆ ಕಂಪನಿಗಳಿಗೆ ನಷ್ಟವಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ.

<><*<><><*><>

ಶರಣರ ವಚನ ಪರಂಪರೆ, ಸಾಮಾಜಿಕ ಕ್ರಾಂತಿ ಹಾಗೂ ಕನ್ನಡದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಪ್ರತಿಬಿಂಬಿಸುವ ಆಧುನಿಕ ವಚನ ಮಂಟಪವನ್ನು ಕಲಬುರಗಿ ನಗರದ ಸಮೀಪ ನಿರ್ಮಿಸಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರಗಿ ತಾಲ್ಲೂಕಿನ ಕಪನೂರು ಗ್ರಾಮದ ಬಳಿ ನಿರ್ಮಿಸಲು ಉದ್ದೇಶಿಸಿರುವ ವಚನ ಮಂಟಪದ ವಿನ್ಯಾಸ, ನಿರ್ಮಾಣದ ರೂಪುರೇಷೆ ಹಾಗೂ ವಿವಿಧ ಸೌಲಭ್ಯಗಳ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಚಿವರು, ಯೋಜನೆಯನ್ನು ಅರ್ಥಪೂರ್ಣವಾಗಿ ರೂಪಿಸುವಂತೆ ಸೂಚಿಸಿದ್ದಾರೆ. ಬೆಂಗಳೂರಿನ ತಮ್ಮ ಕಚೇರಿಯಲ್ಲಿ ನಡೆದ ಸಭೆಯಲ್ಲಿ ವಚನ ಮಂಟಪ ನಿರ್ಮಾಣಕ್ಕೆ ಸಂಬಂಧಿಸಿದಂತೆ ಖ್ಯಾತ ವಾಸ್ತುಶಿಲ್ಪಿಗಳು ಸಿದ್ಧಪಡಿಸಿದ ವಿನ್ಯಾಸ ಹಾಗೂ ಪರಿಕಲ್ಪನಾ ವರದಿಗಳನ್ನು ಸಚಿವರು ಪರಿಶೀಲಿಸಿದರು. ವಚನ ಮಂಟಪದ ಜೊತೆಗೆ ಶರಣರ ಜೀವನ, ವಚನ ಸಾಹಿತ್ಯ ಹಾಗೂ ವಚನ ಚಳವಳಿಯ ಇತಿಹಾಸ ಪರಿಚಯಿಸುವ ವಸ್ತುಸಂಗ್ರಹಾಲಯ, ವ್ಯಾಖ್ಯಾನ ಕೇಂದ್ರ, ಅನುಭವ ಕೇಂದ್ರ ಮತ್ತು ಸಂಶೋಧನಾ ಕೇಂದ್ರ ಸ್ಥಾಪಿಸುವ ಪರಿಕಲ್ಪನೆಯೂ ಇದೆ ಎಂದು ಹೇಳಿದ್ದಾರೆ. ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರು ಸೇರಿದಂತೆ ವಚನ ಚಳವಳಿಯಲ್ಲಿ ಭಾಗವಹಿಸಿದ ಶರಣ-ಶರಣೆಯರ ಜೀವನ, ಸಾಧನೆ, ಭಾವಚಿತ್ರಗಳು ಹಾಗೂ ಅಮೂಲ್ಯ ವಚನಗಳನ್ನು ಇಲ್ಲಿ ಪರಿಚಯಿಸಲಾಗುವುದು.

ಸಮಾನತೆ, ಕಾಯಕ, ದಾಸೋಹ ಹಾಗೂ ಸಾಮಾಜಿಕ ನ್ಯಾಯದ ಸಂದೇಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ರೀತಿಯಲ್ಲಿ ಮಂಟಪವನ್ನು ರೂಪಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

<><*><><>*><>

ರಾಜ್ಯದ ಪಡಿತರ ಚೀಟಿದಾರರಿಗೆ ಇ-ಕೆವೈಸಿ ಮಾಡಿಸಲು ಇಂದು ಕೊನೆಯ ದಿನವಾಗಿದೆ. ಈಗಾಗಲೇ ಎರಡು ಬಾರಿ ಗಡುವು ವಿಸ್ತರಣೆ ಮಾಡಿರುವ ಆಹಾರ ಇಲಾಖೆ, ಇಂದಿನವರೆಗೆ ಅಂತಿಮ ಅವಕಾಶ ನೀಡಿದೆ. ಇಂದೇ ಇ-ಕೆವೈಸಿ ಮಾಡಿಸದಿದ್ದರೆ ರೇಷನ್ ಕಾರ್ಡ್ ರದ್ದಾಗುವ ಸಾಧ್ಯತೆ ಇದೆ. ನವೆಂಬರ್ ೪ ರಂದು ಆಹಾರ ಇಲಾಖೆ ಇ-ಕೆವೈಸಿ ಪ್ರಕ್ರಿಯೆಗೆಗಾಗಿ ಇಂದಿನವರೆಗೆ ಅವಧಿ ವಿಸ್ತರಣೆ ಮಾಡಿತ್ತು. ರಾಜ್ಯದಲ್ಲಿ ಒಟ್ಟು ೨ ಕೋಟಿ ೬೭ ಸಾವಿರ ಪಡಿತರ ಚೀಟಿದಾರರಿದ್ದು, ಸುಮಾರು ೪೦ ಲಕ್ಷ ಮಂದಿ ಇನ್ನೂ ಇ-ಕೆವೈಸಿ ಮಾಡಿಸಿಕೊಳ್ಳಬೇಕಿತ್ತು. ಸರ್ಕಾರದ ಮೂಲಗಳ ಪ್ರಕಾರ ಇನ್ನೂ ೩೯ ಲಕ್ಷದ ೨೦ ಸಾವಿರ ಪಡಿತರ ಚೀಟಿದಾರರು ಇ-ಕೆವೈಸಿ ಮಾಡಿಸಿಕೊಂಡಿಲ್ಲ ಎನ್ನಲಾಗಿದೆ.

<><*><><>*><>

ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಸಿಡಿತದಿಂದ ಕಣ್ಣಿಗೆ ಗಾಯಗೊಂಡು ಬೆಂಗಳೂರಿನ ರಾಜಾಜಿನಗರದಲ್ಲಿರುವ ನಾರಾಯಣ ನೇತ್ರಾಲಯಕ್ಕೆ ಒಟ್ಟು ೪೧ ಮಂದಿ ಚಿಕಿತ್ಸೆಗಾಗಿ ದಾಖಲಾಗಿದ್ದಾರೆ. ಗಾಯಗೊಂಡವರಲ್ಲಿ ೧೭ ಮಂದಿ ವಯಸ್ಕರಾಗಿದ್ದು, ೧೮ ವರ್ಷಕ್ಕಿಂತ ಕಡಿಮೆ ವಯಸ್ಸಿನ ೨೪ ಮಕ್ಕಳು ಸೇರಿದ್ದಾರೆ. ಗಾಯಗೊಂಡವರಲ್ಲಿ ೩೧ ಪುರುಷರು ಹಾಗೂ ೧೦ ಮಹಿಳೆಯರು ಸೇರಿದ್ದಾರೆ. ಪಟಾಕಿ ಸಿಡಿಸುವ ಸಂದರ್ಭದಲ್ಲಿ ಸ್ವತಃ ಗಾಯಗೊಂಡವರು ೨೯ ಮಂದಿಯಾಗಿದ್ದರೆ, ಪಕ್ಕದಲ್ಲಿ ನಿಂತು ವೀಕ್ಷಿಸುತ್ತಿದ್ದ ೧೨ ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳ ಪೈಕಿ ೪೦ ಮಂದಿಗೆ ಔಷಧೋಪಚಾರದ ಮೂಲಕ ಚಿಕಿತ್ಸೆ ನೀಡಲಾಗಿದ್ದು, ಒಬ್ಬರಿಗೆ ಶಸ್ತ್ರಚಿಕಿತ್ಸೆ ನಡೆಸಲಾಗಿದೆ ಎಂದು ಆಸ್ಪತ್ರೆಯ ಪತ್ರಿಕಾ ಪ್ರಕಟಣೆ ತಿಳಿಸಿದೆ. ಪಟಾಕಿ ಸಿಡಿಸುವಾಗ ನಿರ್ಲಕ್ಷ್ಯ ವಹಿಸದೆ, ಮಕ್ಕಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಕಣ್ಣಿನ ರಕ್ಷಣೆಗೆ ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ವೈದ್ಯರು ಸಾರ್ವಜನಿಕರಿಗೆ ಸಲಹೆ ನೀಡಿದ್ದಾರೆ.

<><*><><>*><>

ಬೆಂಗಳೂರು ಮಾತ್ರವಲ್ಲದೆ, ವಿಜಯಪುರ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕೈಗಾರಿಕಾ ಚಟುವಟಿಕೆಗಳಿಗೆ ಉತ್ತೇಜನ ನೀಡಲಾಗುವುದು ಎಂದು ಬೃಹತ್ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಗೆ ಆದ್ಯತೆ ನೀಡುವ ಮೂಲಕ ರಾಜ್ಯದಲ್ಲಿ ಕೈಗಾರಿಕಾ ಬೆಳವಣಿಗೆಗೆ ವೇಗ ನೀಡುವ ಹಾಗೂ ಉದ್ಯೋಗ ಸೃಷ್ಟಿಗೆ ಮತ್ತಷ್ಟು ಉತ್ತೇಜನ ನೀಡುವ ನಿಟ್ಟಿನಲ್ಲಿ,

೧೯೧೧ನೇ ರಾಜ್ಯಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ ಒಟ್ಟು ೧೪೭ ಕೈಗಾರಿಕಾ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದು ಹೇಳಿದ್ದಾರೆ. ಈ ಯೋಜನೆಗಳ ಮೂಲಕ ರಾಜ್ಯಕ್ಕೆ ೬ ಸಾವಿರದ ೮೨೫ ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, ಸುಮಾರು ೧೮ ಸಾವಿರದ ೬೦೦ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಮಾಹಿತಿ ನೀಡಿದ್ದಾರೆ.

<><*<><><*><>

ಚಾಮರಾಜನಗರ ಗಡಿಭಾಗವಾದ ತಮಿಳುನಾಡಿನ ತಾಳವಾಡಿ ತಾಲೂಕಿನ ಗಾಜನೂರು ಗ್ರಾಮದಲ್ಲಿ ಕಳೆದ ರಾತ್ರಿ ವರನಟ ಡಾ. ರಾಜ್ ಕುಮಾರ್ ಸೋದರ ಸಂಬಂಧಿ ಮನೋಹರ್ ಎಂಬವರ ಮನೆ ಸಮೀಪ ನಿಗೂಢ ಸ್ಫೋಟ ಸಂಭವಿಸಿದೆ. ಸ್ಫೋಟದಿಂದಾಗಿ ಮನೆಯ ಕಿಟಕಿ ಗಾಜುಗಳು, ಬಾಗಿಲಿನ ಚೌಕಟ್ಟು ಹಾನಿಗೊಳಗಾಗಿದೆ. ಘಟನೆಯಲ್ಲಿ ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ತಾಳವಾಡಿ ಪೊಲೀಸ್ ಠಾಣಾ ವ್ಯಾಪ್ತಿಗೆ ಗಾಜನೂರು ಗ್ರಾಮ ಒಳಪಡಲಿದ್ದು ಪೊಲೀಸರು ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದ್ದಾರೆ. ತಪ್ಪಿತಸ್ಥರನ್ನು ಶೀಘ್ರವೇ ಬಂಧಿಸಬೇಕು ಎಂದು ಮನೋಹರ್ ಒತ್ತಾಯಿಸಿದ್ದಾರೆ. ಘಟನೆ ಸಂಬಂಧ ತಮಿಳುನಾಡಿನ ಈರೋಡ್ ಜಿಲ್ಲಾ ಪೊಲೀಸರು ಪತ್ರಿಕಾ ಪ್ರಕಟಣೆ ಹೊರಡಿಸಿದ್ದು ಕಚ್ಚಾಬಾಂಬ್ ಬಳಕೆಯನ್ನು ತಳ್ಳಿಹಾಕಿದ್ದಾರೆ.

<><*<><><*><>

ವರ್ಷಕ್ಕೆ ಒಮ್ಮೆ ಮಾತ್ರ ಗರ್ಭಗುಡಿಯ ಬಾಗಿಲು ತೆರೆಯುವ ಹಾಸನದ ಹಾಸನಾಂಬೆ ದರ್ಶನಕ್ಕೆ ಇಂದೇ ಕೊನೆಯ ದಿನವಾಗಿದೆ. ನಾಳೆ ಬೆಳಗ್ಗೆ ಕೆಂಡೋತ್ಸವದ ಬಳಿಕ ಮಧ್ಯಾಹ್ನ ೧೨ ಗಂಟೆಗೆ ಗರ್ಭಗುಡಿಯ ಬಾಗಿಲು ಮುಚ್ಚಲಿದೆ. ಈ ಹಿನ್ನೆಲೆಯಲ್ಲಿ ಇಂದು ರಾತ್ರಿ ವರೆಗೆ ಭಕ್ತರಿಗೆ ದರ್ಶನಕ್ಕೆ ಅವಕಾಶವಿರಲಿದೆ. ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎಂ ಶಿವಲಿಂಗೇಗೌಡ, ಸಾರ್ವಜನಿಕ ದರ್ಶನಕ್ಕೆ ಕೊನೆಯ ದಿನವಾದ ಇಂದು ಭಾರಿ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ. ಎಲ್ಲರಿಗೂ ದರ್ಶನದ ವ್ಯವಸ್ಥೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ದೂರದ ಊರುಗಳಿಂದ ಆಗಮಿಸುವ ಭಕ್ತರಿಗೆ ಸಮಸ್ಯೆ ಆಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗಿದೆ, ಹೀಗಾಗಿ ಭಕ್ತರು ಆತಂಕ ಪಡುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

<><*<><><*><>

ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಇಂದು ದೀಪಾವಳಿ ಮಹಾ ರಥೋತ್ಸವ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ನೆರವೇರಿತು. ಉಘೇ, ಉಘೇ

ಮಾದಪ್ಪ ಎನ್ನುವ ಜಯಘೋಷಗಳೊಂದಿಗೆ ಸಹಸ್ರಾರು ಮಂದಿ ಭಕ್ತರು ರಥ ಎಳೆದು ಹಣ್ಣು-ಧವನ ಸಮರ್ಪಿಸಿ ಪ್ರಾರ್ಥನೆ ಸಲ್ಲಿಸಿದರು. ರಾಜ್ಯ ಹಾಗೂ ತಮಿಳುನಾಡು ಭಾಗದಿಂದಲೂ ಅಪಾರ ಸಂಖ್ಯೆಯಲ್ಲಿ ಬಂದಿದ್ದ ಭಕ್ತರಿಗೆ ಕುಡಿಯುವ ನೀರು, ಶೌಚಾಲಯ, ದಾಸೋಹ ವ್ಯವಸ್ಥೆಯನ್ನು ಜಿಲ್ಲಾಡಳಿತ ವ್ಯವಸ್ಥಿತವಾಗಿ ಮಾಡಿತ್ತು.

<><*<><><*><>

ಕೇಂದ್ರ ಸರ್ಕಾರದ ಜವಳಿ ಮಂತ್ರಾಲಯದ ವತಿಯಿಂದ ೧೦೦ ಬಿಲಿಯನ್ ಡಾಲರ್ ರಫ್ತು ಗುರಿ ಸಾಧನೆಗೆ ಸಂಭಾವ್ಯ ಜವಳಿ ವಲಯ ರಫ್ತು ಉತ್ತೇಜನಕ್ಕಾಗಿ ದಾವಣಗೆರೆಯಲ್ಲಿ ಒಂದು ದಿನದ ಕಾರ್ಯಾಗಾರ ಆಯೋಜಿಸಲಾಗಿದೆ ಎಂದು ಜವಳಿ ಕೈಮಗ್ಗ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>